**1 ನೇ ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಸಾಗರ**

**ಸಿಸಿ ನಂಬರು 512-2022**

**ಸಿ.ಡಬ್ಲ್ಯು -7, ಪಿ.ಡಬ್ಲ್ಯು-2**

**ಸಾಕ್ಷಿದಾರರ ಹೆಸರು** : ಮೀರಾಬಾಯಿ ಡಿ.ಹೆಚ್.
ಗಂಡನ **ಹೆಸರು** : ಶಾಂತರಾಮ್
**ವಯಸ್ಸು** : 51 ವರ್ಷ
**ಉದ್ಯೋಗ** : ಎ.ಎಸ್.ಐ., ಸಾಗರ ಪೇಟೆ ಪೊಲೀಸ್ ಠಾಣೆ
**ವಾಸ** : ಸಾಗರ

**ಪ್ರಮಾಣೀಕರಿಸಿದ ದಿನಾಂಕ :23.06.2026.**

**ಮುಖ್ಯ ವಿಚಾರಣೆ :** ಸ.ಸ.ಅ. ರವರಿಂದ

1. ನಾನು 2014 ರಿಂದ 2018 ರವರೆಗೆ ಸಾಗರದ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿಃ16.03.2021 ರಂದು ಮಧ್ಯಾಹ್ನ 1 ಗಂಟೆಗೆ ಚಾಸ 1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ಪಿರ್ಯಾದನ್ನು ಸ್ವೀಕರಿಸಿ, ಠಾಣಾ ಗುನ್ನೆ ಸಂಖ್ಯೆಃ84/2021 ರಂತೆ ಪ್ರಕರಣವನ್ನು ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಅದೇ ದಿನ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸ 8 ರವರಿಗೆ ವಹಿಸಿಕೊಟ್ಟಿರುತ್ತೇನೆ.

3. ಸಾಕ್ಷಿಯು ನಿಪಿ 6 ರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 6(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ಮತ್ತು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಪ್ರಥಮ ವರ್ತಮಾನ ವರದಿಯನ್ನು ನಿಪಿ 19 ಎಂದು, ಸಾಕ್ಷಿಯ ಸಹಿಯನ್ನು ನಿಪಿ 19(ಎ) ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ- ಆರೋಪಿತರ ಪರ ಶ್ರೀ ಇ.ಎನ್. ವಕೀಲರಿಂದ

1. ಆರೋಪಿತರ ವಿರುದ್ಧ ಪ್ರಕರಣವನ್ನು ದಾಖಲಿಸಲು ಬಾರದ ಪ್ರಕರಣದಲ್ಲಿ ನಾನು ಸುಳ್ಳಾದ ಪ್ರಕರಣವನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಸುಳ್ಳಾದ ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲ</u>

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**
**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.